**Akashvani : Bangalore**
**Regional Bulletin In Kannada**
**12.04.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

ಮುಖ್ಯಾಂಶಗಳು

೧. ಜಾತಿಗಣತಿ ವರದಿ ಸಿದ್ಧಪಡಿಸುವ ವೇಳೆ ಯಾರೂ ಹಸ್ತಕ್ಷೇಪ ಮಾಡಿಲ್ಲ - ಹಿಂದುಳಿದ ವರ್ಗಗಳ ಶಾಶ್ವತ ಆಯೋಗದ ಮಾಜಿ ಅಧ್ಯಕ್ಷ ಎಚ್. ಕಾಂತರಾಜು ಸ್ಪಷ್ಟನೆ

೨. ಬೆಲೆ ಏರಿಕೆ ತಡೆಯುವ ಉದ್ದೇಶದಿಂದ ರಾಜ್ಯದಲ್ಲಿ ೫ ಗ್ಯಾರಂಟಿ ಯೋಜನೆ ಜಾರಿ - ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

೩. ಚಾಮರಾಜನಗರ ಜಿಲ್ಲಾಡಳಿತದ ಬಳಿ ಮೈಸೂರು ರಾಜ ಮನೆತನದ ಯಾವುದೇ ದಾಖಲೆಗಳಿಲ್ಲ ; ಜಿಲ್ಲಾಧಿಕಾರಿ ಪ್ರತಿಕ್ರಿಯೆ

೪. ರಾಜ್ಯ ಸರ್ಕಾರದ ವಿರುದ್ಧ ಜೆಡಿಎಸ್ ಪ್ರತಿಭಟನೆ ; ಕೇಂದ್ರ ಸಚಿವ ಕುಮಾರಸ್ವಾಮಿ ಭಾಗಿ

೫. ಬೆಂಗಳೂರಿನಲ್ಲಿ ಇಂದು ದ್ರೌಪದಿ ದೇವಿ ಕರಗ ಶಕ್ತ್ಯೋತ್ಸವ ಧರ್ಮರಾಯ ಸ್ವಾಮಿ ದೇವಾಲಯದಲ್ಲಿ ವಿಶೇಷ ಪೂಜೆ

**<><*<><>*><>**

ಜಾತಿಗಣತಿ ವರದಿ ಸಿದ್ಧಪಡಿಸುವ ವೇಳೆ ಯಾರು ಹಸ್ತಕ್ಷೇಪ ಮಾಡಿಲ್ಲ ಎಂದು ಹಿಂದುಳಿದ ವರ್ಗಗಳ ಶಾಶ್ವತ ಆಯೋಗದ ಮಾಜಿ ಅಧ್ಯಕ್ಷ ಎಚ್. ಕಾಂತರಾಜು ಸ್ಪಷ್ಟಪಡಿಸಿದ್ದಾರೆ. ಶಿವಮೊಗ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆಂತರಿಕವಾಗಿಯೂ, ಬಹಿರಂಗವಾಗಿಯೂ ಯಾವುದೇ ಒತ್ತಡ ಪ್ರಭಾವಕ್ಕೆ ಒಳಗಾಗಿಲ್ಲ ಎಂದು ಹೇಳಿದ್ದಾರೆ. ೧೯೩೧ ರ ಬಳಿಕ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಬಹಳ ಮಹತ್ವ ಪಡೆದಿದೆ ಎಂದು ತಿಳಿಸಿದ್ದಾರೆ. ಜಾತಿ ವ್ಯವಸ್ಥೆ ತೊಲಗಬೇಕಾದರೆ ಸಾಮಾಜಿಕ ನ್ಯಾಯಕ್ಕೆ ಹೆಚ್ಚು ಒತ್ತು ನೀಡಬೇಕಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಅಸಮಾನತೆಯನ್ನು ಸರಿದೂಗಿಸಲು ಇಂತಹ ಸಮೀಕ್ಷೆಗಳು ಅತ್ಯಗತ್ಯ ಎಂದು ಪ್ರತಿಪಾದಿಸಿದ್ದಾರೆ.

ಧ್ವನಿ : ಮಾಜಿ ಅಧ್ಯಕ್ಷ ಎಚ್. ಕಾಂತರಾಜು (೩೦ ಸೆಕೆಂಡ್‌ಗಳು)

**<><*<><>*><>**

ಕೇಂದ್ರ ಸರ್ಕಾರದ ಬೆಲೆ ಏರಿಕೆ ವಿರುದ್ಧ ಇದೇ ೧೭ರಂದು ಹೋರಾಟ ನಡೆಸಲಾಗುವುದು ಎಂದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಮಾತನಾಡಿದ ಅವರು, ಬಿಜೆಪಿ ನಾಯಕರು ಜನಾಕ್ರೋಶ ಯಾತ್ರೆಯ ಬೋರ್ಡ್ ನಲ್ಲಿ 'ಕೇಂದ್ರ ಬಿಜೆಪಿ

’ಕೇಂದ್ರ ಬಿಜೆಪಿ ಸರ್ಕಾರದ ವಿರುದ್ಧ’ ಎಂದು ಬದಲಾವಣೆ ಮಾಡಿಕೊಳ್ಳಲಿ ಎಂದು ತಿರುಗೇಟು ತಿರುಗೇಟು ನೀಡಿದ್ದಾರೆ. ಬೆಲೆ ಏರಿಕೆ ತಡೆಯಲು ಸರ್ಕಾರ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ಯೋಜನೆಗಳನ್ನು ಜಾರಿಗೆ ತಂದಿದ್ದು, ಕೇಂದ್ರ ಸರ್ಕಾರದ ಬೆಲೆ ಏರಿಕೆ ವಿರುದ್ಧ ರಾಜ್ಯ ಮಟ್ಟದಲ್ಲಿ ರಾಜ್ಯ ಮಟ್ಟದಲ್ಲಿ ಹೋರಾಟ ನಡೆಸಲಾಗುವುದು ಎಂದು ತಿಳಿಸಿದ್ದಾರೆ. ಇದೇ ವೇಳೆ ಕರಗ ಉತ್ಸವಕ್ಕೆ ಕರಗ ಉತ್ಸವಕ್ಕೆ ಅನುದಾನ ನೀಡಿಲ್ಲ ಎಂಬ ಆರೋಪದ ಬಗ್ಗೆ ಪ್ರತಿಕ್ರಿಯಿಸಿ ಇದಕ್ಕಾಗಿ ಬಜೆಟ್ ಇದಕ್ಕಾಗಿ ಬಜೆಟ್ ನಲ್ಲೂ ಅನುದಾನ ಮೀಸಲಿಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. "ಜಾತಿ ಸ್ಪಷ್ಟಪಡಿಸಿದ್ದಾರೆ. "ಜಾತಿ ಗಣತಿಯು ಜನಗಣತಿಯಲ್ಲ, ಎಂದು ತಿಳಿಸಿದ ಅವರು, ಇದು ಸಾಮಾಜಿಕ ಇದು ಸಾಮಾಜಿಕ ಹಾಗೂ ಆರ್ಥಿಕ ಸಮೀಕ್ಷೆಯಾಗಿದೆ ಸ್ಪಷ್ಟನೆ ನೀಡಿದ್ದಾರೆ.

<><*<><>*><>

ಚಾಮರಾಜನಗರ ಜಿಲ್ಲಾಡಳಿತದ ಬಳಿ ರಾಜಮನೆತನಕ್ಕೆ ಸೇರಿದ ಯಾವುದೇ ದಾಖಲೆಗಳಿಲ್ಲ ಎಂದು ಚಾಮರಾಜನಗರ ಜಿಲ್ಲಾಧಿಕಾರಿ ಶಿಲ್ಪಾನಾಗ್ ಹೇಳಿದ್ದಾರೆ. ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೫ ಸಾವಿರ ಎಕರೆ ಜಾಗದ ವಿಚಾರಕ್ಕೆ ಸಂಬಂಧಿಸಿದಂತೆ ಮೈಸೂರು ರಾಜವಂಶಸ್ಥೆ ಪ್ರಮೋದಾದೇವಿ ಒಡೆಯರ್ ಪತ್ರ ಬರೆದ ವಿಚಾರಕ್ಕೆ ಪ್ರತಿಕ್ರಿಯಿಸಿ ತಮ್ಮ ಬಳಿ ರಾಜಮನೆತನಕ್ಕೆ ಸೇರಿದ ಯಾವುದೇ ದಾಖಲೆಗಳಿಲ್ಲ ಎಂದು ತಿಳಿಸಿದ್ದಾರೆ. ಹೀಗಾಗಿ ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ರಾಜಮಾತೆ ಅವರು ತಕರಾರು ಪತ್ರ ಬರೆದಿದ್ದು, ಅದರಲ್ಲಿ ಅಟ್ಟುಗುಳಿಪುರ ಸೇರಿದಂತೆ ೭-೮ ಗ್ರಾಮಗಳಲ್ಲಿ ಜಮೀನುಗಳ ಮೇಲೆ ಹಕ್ಕುಗಳಿವೆ. ಹೀಗಾಗಿ ಕಂದಾಯ ಗ್ರಾಮ ಎಂದು ಕಳುಹಿಸಬೇಡಿ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಆದರೆ ಪತ್ರದೊಂದಿಗೆ ಯಾವುದೇ ಸೂಕ್ತ ದಾಖಲೆಗಳನ್ನು ನೀಡಿಲ್ಲ ಎಂದು ಮಾಹಿತಿ ನೀಡಿದ್ದಾರೆ. ಸದ್ಯ ಪತ್ರವನ್ನು ಉಪವಿಭಾಗಾಧಿಕಾರಿ ಹಾಗೂ ತಹಸೀಲ್ದಾರ್ ಅವರಿಗೆ ಪರಿಶೀಲಿಸುವಂತೆ ತಿಳಿಸಲಾಗಿದೆ. ಒಂದು ವಾರದೊಳಗೆ ದಾಖಲೆ ಪರಿಶೀಲಿಸಿ ವರದಿ ನೀಡಲಾಗುವುದು ಎಂದು ಸ್ಪಷ್ಟನೆ ನೀಡಿದ್ದಾರೆ.

<><*<><>*><>

ರಾಜ್ಯ ಸರ್ಕಾರದ ಬೆಲೆ ಏರಿಕೆ ಧೋರಣೆ ವಿರೋಧಿಸಿ ಜೆಡಿಎಸ್ ಸಾಕಪ್ಪ ಸಾಕು ಕಾಂಗ್ರೆಸ್ ಸರ್ಕಾರ ಕಾಂಗ್ರೆಸ್ ಸರ್ಕಾರ ಹೆಸರಲ್ಲಿ ಬೃಹತ್ ಪ್ರತಿಭಟನೆ ನಡೆಸಿತು. ಜೆಡಿಎಸ್ ರಾಜ್ಯಯುವ ಘಟಕದ ಅಧ್ಯಕ್ಷ ರಾಜ್ಯಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ನೇತೃತ್ವದಲ್ಲಿ ಬೆಂಗಳೂರಿನ ಬೆಂಗಳೂರಿನ ಫ್ರೀಡಂಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಿ ಸರ್ಕಾರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಆಕ್ರೋಶ ವ್ಯಕ್ತಪಡಿಸಿದರು. ತಡವಾಗಿ ಆಗಮಿಸಿದ ಕೇಂದ್ರ ಸಚಿವ ಕುಮಾರಸ್ವಾಮಿ ಪ್ರತಿಭಟನೆಯಲ್ಲಿ ಪ್ರತಿಭಟನೆಯಲ್ಲಿ ಭಾಗಿಯಾಗಿದ್ದರು. ಮಾಜಿ ಸಚಿವ ಎಚ್.ಡಿ.ಕುಮಾರಸ್ವಾಮಿ ಮಾತನಾಡಿ ಮಾತನಾಡಿ ಪರಿಶಿಷ್ಟರ ಹಣವನ್ನು ಗ್ಯಾರಂಟಿ ಯೋಜನೆಗೆ ಬಳಕೆ ಮಾಡಲಾಗುತ್ತಿದೆ. ನಿಗಮ ಮಾಡಲಾಗುತ್ತಿದೆ. ನಿಗಮ ಮಂಡಳಿಗಳ ಅನುದಾನವನ್ನು ದುರ್ಬಳಕೆ ಮಾಡಿಕೊಳ್ಳಲಾಗುತ್ತಿದೆ ಎಂದು ಮಾಡಿಕೊಳ್ಳಲಾಗುತ್ತಿದೆ ಎಂದು ಆರೋಪಿಸಿದರು ಮಾಜಿ ಶಾಸಕ ಅನ್ನದಾನಿ ಮಾತನಾಡಿ, ಕಾಂಗ್ರೆಸ್ ಮಾತನಾಡಿ, ಕಾಂಗ್ರೆಸ್ ಸರ್ಕಾರದ ಬೆಲೆ ಏರಿಕೆಯ ವಿರುದ್ಧ ಹೋರಾಟ ಆರಂಭವಾಗಿದೆ. ರೈತರಿಗೆ, ರೈತರಿಗೆ, ಮಹಿಳೆಯರಿಗೆ, ಪರಿಶಿಷ್ಟರಿಗೆ ಸರ್ಕಾರ ಮೋಸ ಮಾಡುತ್ತಿದ್ದು, ಈ ಸರ್ಕಾರವನ್ನು

ಸರ್ಕಾರವನ್ನು ಕಿತ್ತೊಗೊಯ್ಯುವವರೆಗೆ ಹೋರಾಟ ನಡೆಸಲಾಗುವುದು ಎಂದು ತಿಳಿಸಿದರು.

ತಿಳಿಸಿದರು.

<><*<><>*><>

ಸಮಾನತೆಯನ್ನು ಪ್ರತಿಪಾದಿಸಿದ ಬುದ್ಧ ಬಸವಣ್ಣನವರನ್ನು ತ್ಯಜಿಸಿದವರಿಂದಲೇ ಇಂದು ಸಂವಿಧಾನದ ವಿರುದ್ಧ ದಾಳಿ ನಡೆಯುತ್ತಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಕಳವಳ ವ್ಯಕ್ತಪಡಿಸಿದ್ದಾರೆ. ದಲಿತ ವಿದ್ಯಾರ್ಥಿ ಪರಿಷತ್, ಜಾಗೃತ ಕರ್ನಾಟಕ ಹಾಗೂ ಅನೌಪಚಾರಿಕ ಶಿಕ್ಷಣ ಸಂಸ್ಥೆಗಳ ಸಂಯುಕ್ತ ಆಶ್ರಯದಲ್ಲಿ ವಿಜಯಪುರದಲ್ಲಿ ಇಂದು ಆಯೋಜಿಸಲಾಗಿದ್ದ ಅಂಬೇಡ್ಕರ್ ಹಬ್ಬ ವಿಚಾರ ಸಂಕಿರಣದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಮನುವಾದದ ವಿರುದ್ಧ ಮೊದಲು ಧ್ವನಿ ಎತ್ತಿದವರು ಬುದ್ಧ. ಅದನ್ನು ಮುಂದುವರೆಸಿದವರು ಬಸವಣ್ಣ. ಅದನ್ನು ಸಂವಿಧಾನದ ಆಶಯವನ್ನಾಗಿಸಿದವರು ಅಂಬೇಡ್ಕರ್. ಅದನ್ನೇ ಪ್ರತಿಪಾದಿಸಿದವರು ಕುವೆಂಪು ಎಂದು ಹೇಳಿದ್ದಾರೆ. ವಚನಗಳಿಗೆ ಶರಣು ಎಂದವರಿಂದಲೇ ಇಂದು ವಚನ ಸಾಹಿತ್ಯದ ಮೇಲೆ ದಾಳಿ ಶುರುವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

<><*<><>*><>

ಇಂದು ಚೈತ್ರ ಹುಣ್ಣಿಮೆ. ವಿಶ್ವವಿಖ್ಯಾತ ದ್ರೌಪದಿ ದೇವಿ ಕರಗ ಶಕ್ತ್ಯೋತ್ಸವ ಮಧ್ಯರಾತ್ರಿ ಜರುಗಲಿದೆ. ಈ ಸಂಬಂಧ ಬೇಂಗಳೂರು ಧರ್ಮರಾಯಸ್ವಾಮಿ ದೇವಾಲಯದಲ್ಲಿ ವಿಶೇಷ ಪೂಜಾ ಕೈಂಕರ್ಯ ನಡೆಯುತ್ತಿವೆ. ಮಧ್ಯರಾತ್ರಿ ೧೨.೩೦ರ ವೇಳೆಗೆ ಬೆಂಗಳೂರು ಶಕ್ತ್ಯೋತ್ಸವ ಮಹಾರಥೋತ್ಸವಕ್ಕೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಚಾಲನೆ ನೀಡಲಿದ್ದಾರೆ. ಕರಗ ಮಹೋತ್ಸವದ ಹಿನ್ನೆಲೆಯಲ್ಲಿ ದೇವಾಲಯದಲ್ಲಿ ಬೆಳಗಿನಿಂದಲೇ ವಿಶೇಷ ಪೂಜಾ-ಕೈಂಕರ್ಯಗಳು ನಡೆಯುತ್ತಿದ್ದು, ಅರ್ಚಕ ಜ್ಞಾನೇಂದ್ರ ಅವರೇ ಈ ಬಾರಿಯೂ ಕರಗ ಹೊರಲಿದ್ದಾರೆ. ಚೈತ್ರ ಸಪ್ತಮಿಯಿಂದ ಕರಗ ಮಹೋತ್ಸವದ ಆಚರಣೆಯ ವಿಧಿ ವಿಧಾನಗಳು ಆರಂಭವಾಗಿದ್ದು, ಕರಗ ಉತ್ಸವಕ್ಕೆ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವುದರಿಂದ ತಿಗಳರ ಪೇಟೆಯಲ್ಲಿರುವ ಧರ್ಮರಾಯಸ್ವಾಮಿ ದೇವಸ್ಥಾನದ ಸುತ್ತಮುತ್ತ ತಾತ್ಕಾಲಿಕವಾಗಿ ಸಂಚಾರ ನಿರ್ಬಂಧಿಸಲಾಗಿದೆ ಎಂದು ಬೆಂಗಳೂರು ಸಂಚಾರಿ ಪೊಲೀಸರು ತಿಳಿಸಿದ್ದಾರೆ. ನಾಳೆ ಮುಂಜಾನೆ ಬೆಂಗಳೂರಿನ ಕೆ.ಆರ್. ಮಾರುಕಟ್ಟೆ, ಚಾಮರಾಜಪೇಟೆ ಹಾಗೂ ಉಪ್ಪಾರಪೇಟೆ ಸಂಚಾರ ಪೊಲೀಸ್ ಠಾಣಾ ಸರಹದ್ದಿನ ಪ್ರಮುಖ ರಸ್ತೆಯಲ್ಲಿ ಕರಗ ಮೆರವಣಿಗೆ ಹಾದು ಹೋಗಲಿದೆ. ಧರ್ಮರಾಯ ಸ್ವಾಮಿ ದೇಗುಲದ ಸುತ್ತಮುತ್ತ ಬಿಗಿ ಭದ್ರತೆ ಏರ್ಪಡಿಸಲಾಗಿದೆ. ಚೈತ್ರ ಪೂರ್ಣಿಮೆಯ ಬೆಳದಿಂಗಳ ಬೆಳಕಲ್ಲಿ ಕರಗ ನಡೆಯುವುದು ವಿಶೇಷವಾಗಿದೆ.

<><*<><>*><>

ರಾಜ್ಯ ಸರ್ಕಾರದ ವಿರುದ್ಧ ಕೇಳಿ ಬಂದಿರುವ ಶೇಕಡ ೬೦ ರಷ್ಟು ಕಮಿಷನ್ ಆರೋಪವನ್ನು ಎಸ್ಐಟಿ ಆರೋಪವನ್ನು ಎಸ್ಐಟಿ ತನಿಖೆಗೆ ವಹಿಸುವಂತೆ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಬೊಮ್ಮಾಯಿ ಆಗ್ರಹಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಸರ್ಕಾರ ಜಾತಿಗಣತಿ ರಾಜಕಾರಣ ಮಾಡುತ್ತಿದೆ ರಾಜಕಾರಣ ಮಾಡುತ್ತಿದೆ ಎಂದು ದೂರಿದ್ದಾರೆ.

ಧ್ವನಿ : ಬಸವರಾಜ ಬೊಮ್ಮಾಯಿ (೩೦ ಸೆಕೆಂಡ್‌ಗಳು)

<><*<><>*><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಗಾಂಧಿ ಜಯಂತಿಯಂದು ಕಂಪನಿಗಳ ಸಾಮಾಜಿಕ ಹೊಣೆಗಾರಿಕೆ ಅನುದಾನದಡಿ, ಕರ್ನಾಟಕ ಪಬ್ಲಿಕ್ ಶಾಲೆಯನ್ನು ಆರಂಭಿಸಲಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್. ಮುನಿಯಪ್ಪ ಹೇಳಿದ್ದಾರೆ. ಗ್ರಾಮ ಪಂಚಾಯತಿ ಮಟ್ಟದಲ್ಲಿ ೧೦೦ ಸುಸಜ್ಜಿತ ಶಾಲೆಗಳನ್ನು ಸಿಎಸ್‌ಆರ್ ಅನುದಾನದಡಿ ನಿರ್ಮಾಣ ಮಾಡಲಾಗಿದ್ದು, ಇದೇ ತಿಂಗಳ ೨೮ ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ. ವಿದ್ಯಾರ್ಥಿಗಳ ಕಲಿಕೆಯ ಹಿತದೃಷ್ಟಿಯಿಂದ ಮಕ್ಕಳ ಕಲಿಕೆಗೆ ಎಲ್ಲಾ ರೀತಿಯ ನೆರವನ್ನು ಕಲ್ಪಿಸಿ ಶಾಲೆಗಳ ಮೇಲ್ದರ್ಜೆಗೆ ಏರಿಸಲಾಗುವುದು ಎಂದು ತಿಳಿಸಿದ್ದಾರೆ.

<><*<><>*><>

ಇನ್ನು ಹವಾವರ್ತಮಾನ,

ಕರಾವಳಿ ಕರ್ನಾಟಕ ಮತ್ತು ದಕ್ಷಿಣ ಒಳನಾಡಿನ ಕೆಲವು ಸ್ಥಳಗಳಲ್ಲಿ ಮತ್ತು ಉತ್ತರ ಒಳನಾಡಿನ ಪ್ರತ್ಯೇಕ ಸ್ಥಳಗಳಲ್ಲಿ ಮಳೆಯಾಗಿದೆ. ಧಾರವಾಡ ಜಿಲ್ಲೆಯಲ್ಲಿ ೫ ಸೆಂಟಿ ಮೀಟರ್, ವೈಎನ್ ಹೊಸಕೋಟೆ, ಚಾಮರಾಜನಗರ ತಲಾ ೫, ಸೆಂಟಿ ಮೀಟರ್ ಮಳೆಯಾಗಿದೆ. ಅತಿಹೆಚ್ಚು ಉಷ್ಣಾಂಶ ೪೦.೨ ಡಿಗ್ರಿ ಸೆಲ್ಸಿಯೆಸ್ ಕಲಬುರಗಿಯಲ್ಲಿ ದಾಖಲಾಗಿದೆ. ಉಡುಪಿ, ಉತ್ತರಕನ್ನಡ, ದಕ್ಷಿಣ ಕನ್ನಡ ಸೇರಿದಂತೆ ಒಂದೆರಡು ಸ್ಥಳಗಳಲ್ಲಿ ಇಂದು ಗುಡುಗು ಗಾಳಿ ಸಹಿತ ಹಗುರದಿಂದ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><*<><>*><>

ಸಂಕ್ಷಿಪ್ತ ಸುದ್ದಿಗಳು

೧. ಚಿತ್ರದುರ್ಗ ತಾಲ್ಲೂಕು ಡಿ.ಎಸ್. ಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಕ್ಯಾದಿಗೆರೆ ಗ್ರಾಮದಲ್ಲಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಡಿ ವಲಯ ಬ್ಯಾಲೆನ್ಸಿಂಗ್ ಟ್ಯಾಂಕ್ ನಿರ್ಮಾಣ ಕಾಮಗಾರಿಗೆ ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಇಂದು ಭೂಮಿಪೂಜೆ ನೆರವೇರಿಸಿದರು.

೨. ಗದಗ ಬೆಟಗೇರಿ ಅವಳಿ ನಗರ ಸೇರಿದಂತೆ ಗದಗ ಜಿಲ್ಲೆಯಾದ್ಯಂತ ಹನುಮ ಜಯಂತಿ ಶ್ರದ್ಧಾಭಕ್ತಿಯಿಂದ ಜರುಗಿತು. ಗದಗ ನಗರದ ಐತಿಹಾಸಿಕ ಪ್ರಸಿದ್ಧ ಜೋಡು ಶ್ರೀ ಹನುಮಂತ ದೇವರ ದೇವಸ್ಥಾನದಲ್ಲಿ ಸಹಸ್ರಾರು ಭಕ್ತರು ಹನುಮ ಜಯಂತ್ಯೋತ್ಸವ ಪ್ರಯುಕ್ತ ವಿಶೇಷ ಪೂಜೆ ಸಲ್ಲಿಸಿದರು.

೩. ದೊಡ್ಡಬಳ್ಳಾಪುರದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಇಂದು ಶಿವಶರಣೆ, ವಚನಗಾರ್ತಿ ಅಕ್ಕಮಹಾದೇವಿ ಜಯಂತಿಯನ್ನು ಆಚರಿಸಲಾಯಿತು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**